## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 279.
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 12/07/2018
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿ ಹಾಗೂ ಬಡ್ತಿ ಸಂಬಂಧ ಹೊಸ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲು ರಾಜ್ಯ ಸರ್ಕಾರ ಯಾವಾಗ ತೀರ್ಮಾನ ಕೈಗೊಂಡಿದೆ: | ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 25 ಸೇನಿಡಿ 2017, ದಿ:15/12/2017ರನ್ವಯ ಸಾರ್ವಜನಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ತಿದ್ದುಪಡಿ ಪ್ರಸ್ತಾವನೆಯನ್ನು ಇಲಾಖೆಯಿಂದ ಪಡೆದು, ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ವೃಂದ ಪರಿಶೀಲನಾ ಉಪ ಸಮಿತಿ ಸಭೆಯಲ್ಲಿ ಚರ್ಚಿಸಲಾಗಿದೆ. ಅಲ್ಲದೆ, ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿ:08/03/2018 ಮತ್ತು 31/05/2018ರಂದು ನಡೆದ ಸಭೆಗಳಲ್ಲಿ ನೀಡಿದ ಸೂಚನೆಯಂತೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ತಿದ್ದುಪಡಿ ಪ್ರಸ್ತಾವನೆಯನ್ನು ಪರಿಶೋಧನೆಗಾಗಿ (Scrutiny) ಆರ್ಥಿಕ ಇಲಾಖೆ, ಸಿಆಸು ಇಲಾಖೆ ಮತ್ತು ಸಂಸದೀಯ ವ್ಯವಹಾರಗಳ ಇಲಾಖೆಗಳಿಗೆ ದಿ:05/06/2018ರಂದು ಕಡತಗಳನ್ನು ಸಲ್ಲಿಸಲಾಗಿದೆ.<br><br>ಸದರಿ ಪ್ರಸ್ತಾವನೆಯಲ್ಲಿ ದೈಹಿಕ ಶಿಕ್ಷಣ ಶಿಕ್ಷಕರಿಗೆ ಸಂಬಂಧಿಸಿದಂತೆ, ಈ ಹಿಂದೆ ಇದ್ದ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡಲು ಪ್ರಸ್ತಾಪಿಸಲಾಗಿದೆ.<br><br>ಸಮಗ್ರ ತಿದ್ದುಪಡಿ ಪ್ರಸ್ತಾವನೆಯು ಮೂರು ಇಲಾಖೆಗಳಿಂದ ಪರಿಶೋಧನೆಗೊಂಡು ಹಿಂದಿರುಗಿದ ನಂತರ, ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿನ ವೃಂದ ಪರಿಶೀಲನಾ ಸಮಿತಿ ಸಭೆಯ ಮುಂದೆ ಮಂಡಿಸಿ, ಅನುಮೋದನೆ ಪಡೆದು ಹೊಸ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರಕಟಿಸಲು ಕ್ರಮಕೈಗೊಳ್ಳಲಾಗುವುದು. |
| ಆ) | ಇದುವರೆಗೂ ಈ ಸಂಬಂಧ ಇಲಾಖೆಯ ಕೈಗೊಂಡಿರುವ ಕ್ರಮಗಳೇನು: (ಪೂರ್ಣ ವಿವರ ನೀಡುವುದು) | |
| ಇ) | ಯಾವ ಕಾಲಮಿತಿಯಲ್ಲಿ ನಿಯಮಗಳನ್ನು ರಚಿಸಲಾಗುವುದು? | |

ಸಂಖೆ: ಇಡಿ 109 ಡಿಎಆರ್ 2018.

(ಎನ್. ಮಹೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.